ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತ ನಾಲ್ಕನೇ ಅಧಿವೇಶನ**

**ಬುಧವಾರ, ದಿನಾಂಕ: ೦೭ನೇ ಫೆಬ್ರವರಿ, ೨೦೧೮**

---

**ಸಮೂಹ – III**

೧. ಕಂದಾಯ ಸಚಿವರು

೨. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು

೩. ಅರಣ್ಯ ಸಚಿವರು

೪. ಭಾರಿ  ಮತ್ತು ಮಧ್ಯಮ ನೀರಾವರಿ ಸಚಿವರು

೫. ಕಾರ್ಮಿಕ ಸಚಿವರು

೬. ವಸತಿ ಸಚಿವರು

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು

---

## ಬಗರ್ ಹುಕುಂ ಸಾಗುವಳಿದಾರರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬(೧೧೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಬಗರ್ ಹುಕುಂ ಸಾಗುವಳಿದಾರರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಗರ್ ಹುಕುಂ ಸಾಗುವಳಿದಾರರು ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಬಗರ್ ಹುಕುಂ ಸಾಗುವಳಿದಾರರಿಗೆ ಜಮೀನು ಹಂಚಿಕೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ಒದಗಿಸುವುದು)

## ರಾಜ್ಯದಲ್ಲಿನ ಗ್ರಾಮಗಳಲ್ಲಿ ಸ್ಮಶಾನ ಜಾಗದ ಒತ್ತುವರಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭(೧೬೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕ ಸ್ಮಶಾನಕ್ಕೆ ಜಾಗ ಇದೆಯೇ;

(ಆ) ರಾಜ್ಯದ ಯಾವ ಯಾವ ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕ ಸ್ಮಶಾನಕ್ಕೆ ಜಾಗ ಇರುವುದಿಲ್ಲ; (ಮಾಹಿತಿ ನೀಡುವುದು)

(ಇ) ಸಾರ್ವಜನಿಕ ಸ್ಮಶಾನಕ್ಕೆ ಜಾಗ ಇಲ್ಲದಿದ್ದಲ್ಲಿ, ಸರ್ಕಾರಿ ಜಾಗವನ್ನು ಮೀಸಲಿಡಲಾಗಿದೆಯೇ;

(ಈ) ಈಗಾಗಲೇ ಸ್ಮಶಾನಕ್ಕೆ ಮಂಜೂರಾಗಿರುವ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಯಾವ ಗ್ರಾಮ ಪಂಚಾಯತಿಗಳಲ್ಲಿ ಸ್ಮಶಾನಕ್ಕೆ ಮೀಸಲಿಟ್ಟ ಜಾಗವನ್ನು ಒತ್ತುವರಿ ಮಾಡಲಾಗಿದೆ; ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ಈ ಬಗ್ಗೆ ಸರ್ಕಾರ ಗ್ರಾಮ ಪಂಚಾಯತಿಗಳಿಗೆ ಯಾವ ಆದೇಶ ಜಾರಿಗೊಳಿಸಿದೆ?

## ಭೂಮಾಪನ ಸಿಬ್ಬಂದಿಗಳ ನೇಮಕಾತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೧೮(೧೭೯) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿನ ಕೆರೆ, ನಾಲೆ, ಪಿಕಪ್‌ಗಳ ಸರ್ವೆ ಮಾಡಲು ಶಾಶ್ವತ ಭೂಮಾಪನ ಸಿಬ್ಬಂದಿ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಶಾಶ್ವತ ಸಿಬ್ಬಂದಿಗಳು ಇಲ್ಲವೆ ಸರ್ವೆ ಕಾರ್ಯಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಶಾಶ್ವತ ಭೂಮಾಪನ ಸಿಬ್ಬಂದಿ, ಸರ್ವೆ ಸಿಬ್ಬಂದಿಗಳ ನೇಮಕಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಚಿಕ್ಕಮಗಳೂರು ಜಿಲ್ಲೆಯ ಮೀನುಗಾರರ ಅಭಿವೃದ್ಧಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯(೧೪೩) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೀನುಗಾರರ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು; (ಮಾಹಿತಿ ಒದಗಿಸುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಲಬುರ್ಗಿ ನಗರದಲ್ಲಿರುವ ಶ್ರೀ ಚಂದ್ರಶೇಖರ ಪಾಟೇಲ್ ಕ್ರೀಡಾಂಗಣದ ಅಭಿವೃದ್ಧಿಯ ಬಗ್ಗೆ

**ಶ್ರೀ ಅಮರನಾಥ ಪಾಟೇಲ್ (ಪದವೀಧರರ ಕ್ಷೇತ್ರ) –**

೨೦(೧೩೯) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ನಗರದಲ್ಲಿರುವ ಶ್ರೀ ಚಂದ್ರಶೇಖರ ಪಾಟೀಲ ಕ್ರೀಡಾಂಗಣದ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆಯೇ; ಇದ್ದರೆ, ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳ ಯೋಜನೆ, ಅಂದಾಜು ವೆಚ್ಚದ ಸವಿವರ ಪ್ರತ್ಯೇಕ ಮಾಹಿತಿ ನೀಡುವುದು;

(ಆ) ಸದರಿ ಕ್ರೀಡಾಂಗಣಕ್ಕೆ ಯಾವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಪಡೆಯಲಾಗಿದೆ; ಹಾಗಿದ್ದಲ್ಲಿ, ಶಾಸಕರ, ಅನುದಾನ ಮೊತ್ತ, ಯಾವ ಯೋಜನೆಗೆ ನೀಡಲಾಗಿದೆ ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನ ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು;

(ಇ) ಸದರಿ ಕ್ರೀಡಾಂಗಣದಲ್ಲಿ ಮೇಲ್ಕಂಡ ಕಾಮಗಾರಿಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಕಾಮಗಾರಿಗಳ ಪ್ರಸ್ತುತ ಪ್ರಗತಿಯ ಮಾಹಿತಿ ನೀಡುವುದು)

## ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧(೧೦೫) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಲಸಂಪನ್ಮೂಲ ಇಲಾಖೆಯಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿಗೆ ಆಯವ್ಯಯದಲ್ಲಿ ನಿಗದಿ ಮಾಡಲಾಗಿರುವ ಹಣವೆಷ್ಟು; ಅದರಲ್ಲಿ ಬಿಡುಗಡೆ ಮಾಡಲಾಗಿರುವ ಮತ್ತು ಖರ್ಚು ಮಾಡಲಾಗಿರುವ ಹಣ ಎಷ್ಟು; ೨೦೧೩–೧೪ರಿಂದ ಇಲ್ಲಿಯವರೆಗೆ ವರ್ಷಾವಾರು ವಿವರ ನೀಡುವುದು;

(ಆ) ೨೦೧೩–೧೪ ರಿಂದ ಇಲ್ಲಿಯವರೆಗೆ ದಕ್ಷಿಣ ಕರ್ನಾಟಕದ ಯೋಜನೆಗಳಿಗೆ ಮತ್ತು ಉತ್ತರ ಕರ್ನಾಟಕದ ಕೃಷ್ಣಾ ಮೇಲ್ದಂಡೆ ಯೋಜನೆ, ಭದ್ರಾ ಮೇಲ್ದಂಡೆ ಯೋಜನೆ ಮತ್ತು ಕಾವೇರಿ ಮೇಲ್ದಂಡೆ ಯೋಜನೆಗಳಿಗೆ ನಿಗದಿಗೊಳಿಸಿದ ಹಣ ಎಷ್ಟು; ಬಿಡುಗಡೆ ಮಾಡಿದ ಹಣ ಎಷ್ಟು; ಖರ್ಚು ಮಾಡಿರುವ ಹಣ ಎಷ್ಟು? (ವರ್ಷಾವಾರು ವಿವರ ನೀಡುವುದು)

## ಪಹಣಿ ಪತ್ರಿಕೆಯಲ್ಲಿ ಸುಧಾರಿತ ತಂತ್ರಾಂಶ ಅಳವಡಿಸಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨(೧೧೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಹಣಿ ಪತ್ರಿಕೆಯಲ್ಲಿ ಸುಧಾರಿತ ತಂತ್ರಾಂಶ ವ್ಯವಸ್ಥೆಗೆ ಹೊಂದಾಣಿಕೆಯಾಗದೆ ಇರುವುದರಿಂದ ಹೊಸ ಪಹಣಿ ಪತ್ರ (ಆರ್‌ಟಿಸಿ) ನೋಂದಣಿ ಪ್ರಕ್ರಿಯೆ

ಸ್ಥಗಿತಗೊಂಡಿರುವುದರಿಂದ ರೈತರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸುಧಾರಿತ ತಂತ್ರಾಂಶ ಅಳವಡಿಸುವಲ್ಲಿ ವಿಳಂಭವಾಗಲು ಕಾರಣಗಳೇನು;

(ಇ) ಈ ತೊಂದರೆಯನ್ನು ತಪ್ಪಿಸಿ ನಿಗದಿತ ಅವಧಿಯಲ್ಲಿ ರೈತರಿಗೆ ಪಹಣಿ ಸಿಗುವಂತೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಈ) ದಿನನಿತ್ಯದ ವ್ಯವಹಾರಗಳಿಗೆ ಪಹಣಿ ಪತ್ರ (ಆರ್‌ಟಿಸಿ)ವನ್ನು ಸುಲಭವಾಗಿ ಶೀಘ್ರವಾಗಿ ರೈತರಿಗೆ ದೊರಕುವಂತೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಅನುದಾನಿತ ಐಟಿಐ ಸಂಸ್ಥೆಗಳಿಗೆ ನೀಡುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) –**

೨೩(೧೮೧) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನುದಾನಿತ ಐಟಿಐ ಕಾಲೇಜುಗಳ ನೌಕರರುಗಳಿಗೆ ಥಾಮಸ್ ವರದಿಯನ್ವಯ ೧೯೯೭ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗಿದೆಯೇ; (ವಿವರ ನೀಡುವುದು)

(ಆ) ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; ಸದರಿ ಸೌಲಭ್ಯಗಳನ್ನು ಈ ನೌಕರರಿಗೆ ನೀಡಲಾಗಿದೆಯೇ; ನೀಡಿಲ್ಲದಿದ್ದರೆ, ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಹೆರಿಗೆ ರಜಾ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು;

(ಈ) ಐಟಿಐ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ನೌಕರರಲ್ಲಿ ಇದುವರೆವಿಗೆ ಎಷ್ಟು ನೌಕರರು ನಿವೃತ್ತರಾಗಿದ್ದಾರೆ; (ವಿವರ ನೀಡುವುದು) ನಿವೃತ್ತರಾದ ನೌಕರರಿಗೆ ಸರ್ಕಾರಿ ಆದೇಶದನ್ವಯ ಪಿಂಚಣಿ ನೀಡದಿರಲು ಕಾರಣಗಳೇನು; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡುತ್ತಿರುವ ಎಲ್ಲಾ ಸೌಲಭ್ಯಗಳನ್ನು ಈ ನೌಕರರಿಗೆ ನೀಡಲು ಕ್ರಮ ಕೈಗೊಳ್ಳಲಾಗುತ್ತದೆ? (ವಿವರ ನೀಡುವುದು)

## ಖಾತೆ ಮತ್ತು ಪೋಡಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪(೧೨೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರ ಬಗರ್ ಹುಕುಂ ಸಾಗುವಳಿಯಂತೆ ಫಾರಂ ೫೦ ಮತ್ತು ೫೩ರಲ್ಲಿ ಅರ್ಜಿ ಸಲ್ಲಿಸಿದ್ದವರಿಗೆ ಮಂಜೂರಾಗಿರುವ ಜಮೀನುಗಳ ಖಾತೆ ಮತ್ತು ಪೋಡಿ ಮಾಡದಿರಲು ಕಾರಣವೇನು;

(ಆ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಡಿಯಲ್ಲಿ ಭೂ ಪರಿವರ್ತನೆ ನಿಯಮಗಳ ಪ್ರಕಾರ ಸಾರ್ವಜನಿಕ ಹಿತದೃಷ್ಟಿಯಿಂದ ಸರಳೀಕರಣ ಮಾಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳಾವುವು?

## ಪಂತರಪಾಳ್ಯ ಸರ್ವೆ ನಂ. ೪೭ ಮತ್ತು ೫೫ರ ಜಮೀನಿನ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು) –**

೨೫(೧೧೭) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿಯ ಪಂತರಪಾಳ್ಯ ಗ್ರಾಮದ ಸರ್ವೆ ನಂ. ೪೭ ಮತ್ತು ೫೫ರ ಜಮೀನುಗಳನ್ನು ಸರ್ಕಾರ ವಶಕ್ಕೆ ಪಡೆದಿರುವ ಪ್ರಕರಣಗಳು ಇದೆಯೇ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಆ) ಸದರಿ ಜಮೀನುಗಳ ಮೇಲೆ ನ್ಯಾಯಾಲಯದಲ್ಲಿ ದಾವೆಗಳು ಇದೆಯೇ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಇ) ಭೌತಿಕವಾಗಿ ಸದರಿ ಮೇಲ್ಕಂಡ ಸ್ವತ್ತುಗಳು ಯಾವ ಸ್ಥಿತಿಯಲ್ಲಿರುತ್ತದೆ; ಇದ್ದಲ್ಲಿ, ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಈ) ಸದರಿ ಜಮೀನುಗಳು ಸರ್ಕಾರದಿಂದ ಈ ಹಿಂದೆ ಖಾಸಗಿ ವ್ಯಕ್ತಿ/ ಸಾರ್ವಜನಿಕ ಉದ್ಯಮಿಗಳಿಗೆ ಯಾರಿಗಾದರೂ ಮಂಜೂರಾತಿಯಾಗಿದೆಯೇ; (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

(ಉ) ಸದರಿ ಜಮೀನುಗಳು ಯಾವ ಗುಂಪಿನ ಖರಾಬು ಜಮೀನಾಗಿರುತ್ತದೆ? (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

## ಕಾರ್ಮಿಕ ಬಂಧು "ಸ್ವಯಂ ಸೇವಕರ"ನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೨೬(೧೨೫) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಕಾರ್ಮಿಕ ಬಂಧು" ಸ್ವಯಂ ಸೇವಕರನ್ನು ಯಾವ ಯೋಜನೆಯಡಿ ನೇಮಕ ಮಾಡಿಕೊಳ್ಳಲಾಗುತ್ತದೆ; ಇವರಿಗೆ ನೀಡುತ್ತಿರುವ ವೇತನ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ಸರ್ಕಾರ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲು ಉದ್ದೇಶಿಸಿದೆ; ನೇಮಕಾತಿಗಾಗಿ ಅನುಸರಿಸುತ್ತಿರುವ ಮಾನದಂಡಗಳೇನು;

(ಇ) ಈ ಹುದ್ದೆಗೆ ಗ್ರಾಮೀಣ ನಿರುದ್ಯೋಗಿ ಪದವೀಧರರನ್ನು ನೇಮಕ ಮಾಡಿಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು;

(ಈ) ಈ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ.ಗೆ ಬದಲಾಗಿ ನಿರುದ್ಯೋಗ ಪದವೀಧರರನ್ನು ನೇಮಕ ಮಾಡಿಕೊಳ್ಳಲು ಆದೇಶ ಹೊರಡಿಸಲಾಗುವುದೇ?

## ಡೀಮ್ಡ್ ಫಾರೆಸ್ಟ್ ವಿರಹಿತಪಡಿಸಿ ೯ಳಸಿ, ೯ಳಸಿಸಿ, ಅಕ್ರಮ–ಸಕ್ರಮ ಭೂ ಮಂಜೂರಾತಿ ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭(೧೩೭) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಿರುವ ಭೂ ಭಾಗವೆಷ್ಟು;

(ಆ) ಡೀಮ್ಡ್ ಫಾರೆಸ್ಟ್ ವಿರಹಿತಪಡಿಸಲು ರಾಜ್ಯ ಸಚಿವ ಸಂಪುಟ ನಿರ್ಣಯ ಕೈಗೊಂಡಿದೆಯೇ; ಹೌದಾದರೆ, ನಿರ್ಣಯದ ಮುಖ್ಯಾಂಶಗಳೇನು; ನಿರ್ಣಯ ಕೈಗೊಂಡಿದ್ದು ಯಾವಾಗ;

(ಇ) ಸಚಿವ ಸಂಪುಟ ನಿರ್ಣಯ ಕೈಗೊಂಡ ನಂತರವೂ ನಮೂನೆ ೫೦, ೫೩, ಅಕ್ರಮ ಸಕ್ರಮ, ೯ಳಸಿ, ೯ಳಸಿಸಿ ಅರ್ಜಿದಾರರಿಗೆ ಭೂ ಮಂಜೂರಾತಿ ಮಾಡದಿರಲು ಕಾರಣಗಳೇನು;

(ಈ) ಸಚಿವ ಸಂಪುಟದ ನಿರ್ಣಯವನ್ನು ಯಾವ ಕಾಲಮಿತಿಯಲ್ಲಿ ಅನುಷ್ಠಾನ ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಖಾಸಗಿ ವಲಯದ ಉದ್ದಿಮೆಗಳಲ್ಲಿ ಕನ್ನಡಿಗರಿಗೆ ಮೀಸಲಾತಿ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೮(೯೬) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ವಲಯದ ಉದ್ದಿಮೆಗಳಲ್ಲಿ ಸಿ ಮತ್ತು ಡಿ ವೃಂದದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಶೇಕಡ ೧೦೦ರಷ್ಟು ಉದ್ಯೋಗವನ್ನು

ಒದಗಿಸಲು ಯೋಜಿಸಿದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಆ) ಖಾಸಗಿ ವಲಯದ ಉದ್ದಿಮೆಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ನೀಡಲು ಅವಕಾಶ ಕಲ್ಪಿಸಲಾಗಿದೆಯೇ;

(ಇ) ಖಾಸಗಿ ವಲಯದವರು ಉದ್ಯೋಗ ಒದಗಿಸದೇ ಇದ್ದಲ್ಲಿ, ಇಂತಹ ಉದ್ದಿಮೆಗಳ ಮೇಲೆ ಕೈಗೊಂಡ ಕ್ರಮವೇನು? (ವಿವರವಾದ ಮಾಹಿತಿ ನೀಡುವುದು)

## ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯(೧೬೯) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಹಾವೇರಿ ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಯಿಂದ ವಿವಿಧ ಯೋಜನೆಗಳಡಿಯಲ್ಲಿ ಬಂದ ಅನುದಾನ ಎಷ್ಟು; ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ; (ವರ್ಷಾವಾರು, ಯೋಜನೆವಾರು, ಕಾಮಗಾರಿಗಳವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಶಿಗ್ಗಾಂವ–ಸವಣೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು; ೨೦೧೩–೧೪ ರಿಂದ ೨೦೧೭–೧೮ರವರೆಗೆ ಹೂಳು ಎತ್ತಲು ಹಾಗೂ ಅಭಿವೃದ್ಧಿಪಡಿಸಲು ಒದಗಿಸಲಾಗಿರುವ ಅನುದಾನ ಎಷ್ಟು; ಇವುಗಳಲ್ಲಿ ಖರ್ಚಾದ ಅನುದಾನ ಎಷ್ಟು; (ವರ್ಷಾವಾರು, ಕೆರೆವಾರು, ಅನುದಾನವಾರು ಮತ್ತು ಊರುಗಳವಾರು ಮಾಹಿತಿ ಒದಗಿಸುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ಒತ್ತುವರಿಯಾದ ಕೆರೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಮನೆಗಳು ಹಾಗೂ ಜಮೀನು ಮಾಡಿಕೊಂಡ ಕೆರೆಗಳು ಎಷ್ಟು; ಒತ್ತುವರಿಯನ್ನು ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳೇನು? (ತಾಲ್ಲೂಕುವಾರು, ಕೆರೆಗಳವಾರು ಮತ್ತು ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

## ಕಂದಾಯ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೦(೧೦೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರದ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ತಹಶೀಲ್ದಾರ್ ಹುದ್ದೆಗಳೆಷ್ಟು; (ಗ್ರೇಡ್–೧ ಮತ್ತು ಗ್ರೇಡ್–೨ ಸಹಿತವಾಗಿ) ಇವುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ವಿವರಗಳನ್ನು ನೀಡುವುದು)

(ಆ) ಕಂದಾಯ ಇಲಾಖೆಯಲ್ಲಿ ನಿಯೋಜನೆ ಮೇಲೆ ತಹಶೀಲ್ದಾರರ ಮತ್ತು ಉಪ ವಿಭಾಗಾಧಿಕಾರಿಗಳ ಹುದ್ದೆಯನ್ನು ತುಂಬಲು ಅನುಸರಿಸುತ್ತಿರುವ ಮಾನದಂಡಗಳಾವುವು; ಮಂಜೂರಾಗಿರುವ ಉಪ ವಿಭಾಗಾಧಿಕಾರಿಗಳ ಹುದ್ದೆಗಳೆಷ್ಟು; ಇವುಗಳಲ್ಲಿ ಬಾಕಿಯಿರುವ ಹುದ್ದೆಗಳೆಷ್ಟು; ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಉಪವಿಭಾಗಾಧಿಕಾರಿಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಇ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಎಷ್ಟು ತಹಶೀಲ್ದಾರರ ಮೇಲೆ ಭ್ರಷ್ಟಾಚಾರ ಆರೋಪದ ದೂರುಗಳು ಬಂದಿರುತ್ತದೆ; ಕ್ರಿಮಿನಲ್ ಪ್ರಕರಣಗಳು ದಾಖಲಾಗಿರುವ ತಹಶೀಲ್ದಾರರ ಸಂಖ್ಯೆ ಎಷ್ಟು; ಕ್ರಿಮಿನಲ್

ಪ್ರಕರಣಗಳನ್ನು ಹೂಡಲು ಅನುಮತಿಗಾಗಿ ಬಾಕಿಯಿರುವ ಕಡತಗಳೆಷ್ಟು; (ವಿವರವಾದ ಮಾಹಿತಿಯನ್ನು ನೀಡುವುದು)

(ಈ) ತಾಲ್ಲೂಕು ದಂಡಾಧಿಕಾರಿ/ತಹಶೀಲ್ದಾರರಿಗೆ ಒಂದು ತಾಲ್ಲೂಕಿನಲ್ಲಿ ಎಷ್ಟು ಆಡಳಿತಾತ್ಮಕ ಹಾಗೂ ಅರೆ ನ್ಯಾಯಿಕ ಅಧಿಕಾರಿಗಳನ್ನು ನೀಡಲಾಗಿದೆ; ಇವರಿಗೆ ನೀಡಿರುವ ಕಾರ್ಯಭಾರವನ್ನು ಆಡಳಿತದ ದೃಷ್ಟಿಯಿಂದ ಕಡಿಮೆಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ 908 – 1500 ಪ್ರತಿಗಳು (ಪಿ1)